## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಚಾಮರಾಜನಗರ ಜಿಲ್ಲೆಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣಾ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಮೆಡಿಕಲ್ ಕಿಟ್ ಮತ್ತು ಬೋರ್ಡ್ ಖರೀದಿಯಲ್ಲಿನ ಅವ್ಯವಹಾರಕ್ಕೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯನ್ನು ನೇಮಕ ಮಾಡುವ ಬಗ್ಗೆ ಆದೇಶ.

ಓದಲಾಗಿದೆ: (1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾಪಂಚಾಯತಿ, ಚಾಮರಾಜನಗರ ಇವರ ಪತ್ರ ಸಂಖ್ಯೆ:ಜಿಪಂಚಾ:ಉಖಾಯೋ:26:2012-13, ದಿ:04-7-2013.

(2) ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ 70 ವಿಸೇಬಿ 2012, ದಿನಾಂಕ:19-11-2013.

(3) ಅಪಾದಿತರ ಲಿಖಿತ ಹೇಳಿಕೆ ದಿನಾಂಕ:03-04-2017.

-000-

<u>ಪ್ರಸ್ತಾವನೆ:</u>

ಮೇಲೆ ಓದಲಾದ ಕ್ರಮಸಂಖ್ಯೆ:(1)ರ ದಿನಾಂಕ:04-7-2013 ರ ಪತ್ರದಲ್ಲಿ ಚಾಮರಾಜನಗರ ಜಿಲ್ಲೆಯ 2010-11ನೇ ಸಾಲಿನಲ್ಲಿ ವಿವಿಧ ಗ್ರಾಮ ಪಂಚಾಯತಿಗಳಲ್ಲಿ ಎಂ.ಜಿ.ಎನ್.ಆರ್.ಇ.ಜಿ.ಎ ಯೋಜನೆಯಲ್ಲಿ ನಾಮಫಲಕಗಳು, ಎಸ್.ಎಂ.ಎಸ್ ಸ್ಟಾರ್ಟರ್ ಮತ್ತು ಮೆಡಿಕಲ್ ಕಿಟ್‌ಗಳ ಖರೀದಿಯಲ್ಲಿ ಮಾರುಕಟ್ಟೆ ದರಕ್ಕಿಂತ ಹೆಚ್ಚುವರಿಯಾಗಿ ಹಣ ಪಾವತಿಸಿರುವ ಮತ್ತು ಪಾರದರ್ಶಕ ನಿಯಮಗಳನ್ನು ಪಾಲಿಸದೆ ಇರುವ ಹಾಗೂ ಮಾರ್ಗಸೂಚಿಗಳನ್ನು ಉಲ್ಲಂಘಿಸಿ ಹಣ ದುರುಪಯೋಗ/ಕರ್ತವ್ಯ ಲೋಪವನ್ನು ಎಸಗಿರುವ ಮತ್ತು ಇತರೆ ಆರೋಪಗಳಿಗೆ ಸಂಬಂಧಿಸಿದಂತೆ 5 ಜನ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ಒಳಗೊಂಡಂತೆ 30 ಜನ ಕಾರ್ಯದರ್ಶಿ/ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಕರ್ತವ್ಯ ನಿರ್ಲಕ್ಷತೆ ತೋರಿರುವ ಸದರಿ ಪ್ರಕರಣಕ್ಕೆ ಸಂಬಂಧಿಸಿದ ದುರುಪಯೋಗಕ್ಕೆ ಕಾರಣರಾಗಿ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿ, ಕರ್ನಾಟಕ ನಾಗರೀಕ ಸೇವಾ(ನಡತೆ) ನಿಯಮಾವಳಿ 1966ರ ನಿಯಮ 3(1)ರ ಉಪನಿಯಮ (i),(ii),(iii) ಅನ್ನು ಉಲ್ಲಂಘಿಸಿರುರುವ ಆರೋಪಗಳಿಗೆ ಸಂಬಂಧಿಸಿದಂತೆ ಸದರಿ ಅಧಿಕಾರಿಯ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಾಮರಾಜನಗರ ರವರು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಪ್ರಕರಣದಲ್ಲಿ ಸರ್ಕಾರದ ಮಾರ್ಗ ಸೂಚಿಗಳನ್ನು ಉಲ್ಲಂಘಿಸಿ ಕರ್ತವ್ಯ ನಿರ್ಲಕ್ಷತೆ ತೋರಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ ಪ್ರಕರಣದಲ್ಲಿ ಭಾಗಿಯಾಗಿರುವ ಅಧಿಕಾರಿ/ನೌಕರರುಗಳಿಗೆ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಗಳು 1957ರ ನಿಯಮ 11 ರಡಿಯಲ್ಲಿ ಕಾರಣ ಕೇಳುವ ನೋಟಿಸಿನೊಂದಿಗೆ ದೋಷಾರೋಪಣ ಪಟ್ಟಿಯನ್ನು ದಿ:19-11-2013 ರಂದು ಜಾರಿಗೊಳಿಸಲಾಗಿತ್ತು.

ಸದರಿ ಪ್ರಕರಣದಲ್ಲಿ ಈ ಕೆಳಕಂಡ 5 ಜನ ಕಾರ್ಯನಿರ್ವಾಹಕ ಅಧಿಕಾರಿಗಳು ದಿನಾಂಕ:14.09.2009 ರಿಂದ 06.07.2011 ರವರೆಗೆ ಚಾಮರಾಜನಗರ ಜಿಲ್ಲೆಯ ವಿವಿಧ

ತಾಲ್ಲೂಕು ಪಂಚಾಯಿತಿಗಳಲ್ಲಿ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದು, 2010-11 ನೇ ಸಾಲಿನಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಅನುಷ್ಠಾನಕ್ಕೆ ಸಂಬಂಧಪಟ್ಟಂತೆ ನಾಮಫಲಕಗಳನ್ನು ಪಾರದರ್ಶಕ ಕಾಯ್ದೆ ನಿಯಮದಡಿ ಖರೀದಿ ಮಾಡಬೇಕಾಗಿದ್ದು, ವಿವಿಧ ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿಗಳಿಗೆ ನಾಮಫಲಕಗಳನ್ನು ಖರೀದಿಸಲಾಗಿರುತ್ತದೆ. ಉಪ ನಿರ್ದೇಶಕರು, ಖಾದಿ ಮತ್ತು ಗ್ರಾಮೋದ್ಯೋಗ ಇಲಾಖೆ ಇವರು ನಾಮಫಲಕ ಒಂದಕ್ಕೆ ರೂ.851.25/- ರಂತೆ ಬೆಲೆ ಆಗುವುದೆಂದು ತಿಳಿಸಿದ್ದು, ಗ್ರಾಮ ಪಂಚಾಯಿತಿಯಿಂದ ಪ್ರತಿ ಬೋರ್ಡ್‌ಗೆ ರೂ.2,154.22/-ರ ದರದಲ್ಲಿ ಖರೀದಿಸಲು ಕಾರಣರಾಗಿರುತ್ತಾರೆ. ಸದರಿ 5 ಜನ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ತಾಲ್ಲೂಕು ಪಂಚಾಯಿತಿ ವ್ಯಾಪ್ತಿಯಲ್ಲಿನ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ ಪಾರದರ್ಶಕತೆ ನಿಯಮದಡಿ ಖರೀದಿಸಲಾಗಿದೆಯೇ? ಖರೀದಿಸಿರುವ ಸಾಮಾಗ್ರಿ ಆರ್ಥಿಕ ಔಚಿತ್ಯ ಸೂತ್ರದನ್ವಯ ವೈಜ್ಞಾನಿಕ ದರದಿಂದ ಕೂಡಿದೆಯೇ? ಪಾವತಿಸಿರುವ ಹಣ ಮಾರುಕಟ್ಟೆ ಬೆಲೆಗೆ ಅನುಗುಣವಾಗಿದೆಯೇ? ಎಂಬುದರ ಬಗ್ಗೆ ಸದರಿ ಯೋಜನೆಯ ಅನುಷ್ಠಾನದ ಉಸ್ತುವಾರಿ ಮತ್ತು ಪರಿವೀಕ್ಷಣೆ ಹಾಗೂ ಪರಿಶೀಲಿಸಿ ವರದಿ ಮಾಡದೆ ಬಿಲ್ಲುಗಳಿಗೆ ಸಹಿ ಮಾಡಿ ಕರ್ತವ್ಯ ಲೋಪವೆಸಗಿರುತ್ತಾರೆ.

| ಕ್ರ.ಸಂ | ಹೆಸರು | ಹುದ್ದೆ |
|---|---|---|
| 1 | ಶ್ರೀ ಜೈ ಕೃಷ್ಣ | ಕಾ.ನಿ.ಅ ತಾ.ಪಂ ಚಾಮರಾಜನಗರ |
| 2 | ಶ್ರೀ ಎಂ.ಇ.ರಾಧಕೃಷ್ಣ | ಕಾ.ನಿ.ಅ ತಾ.ಪಂ ಯಳಂದೂರು |
| 3 | ಶ್ರೀ ಎನ್.ಎಸ್.ಮಹಾದೇವಸ್ವಾಮಿ | ಕಾ.ನಿ.ಅ ತಾ.ಪಂ ಯಳಂದೂರು |
| 4 | ಶ್ರೀ ಎಚ್.ಡಿ.ಮಹಾಲಿಂಗಯ್ಯ | ಕಾ.ನಿ.ಅ ತಾ.ಪಂ ಕೊಳ್ಳೇಗಾಲ |
| 5 | ಡಾ. ಶಿವಣ್ಣ | ಕಾ.ನಿ.ಅ ತಾ.ಪಂ ಯಳಂದೂರು |

ಮುಂದುವರೆದು, ಪ್ರಕರಣದಲ್ಲಿ ಭಾಗಿಯಾಗಿರುವ ಕೆಲವು ಅಧಿಕಾರಿ/ನೌಕರರುಗಳು ದಿನಾಂಕ:19.11.2013ರ ಕಾರಣ ಕೇಳುವ ನೋಟೀಸ್‌ಗೆ ಉಚಿತ ಹೇಳಿಕೆಯನ್ನು ಸಲ್ಲಿಸುತ್ತಾ, ಸರ್ಕಾರಕ್ಕೆ ನಷ್ಟವಾದ ಪೂರ್ಣ ಹಣ ಪಾವತಿಸಿರುತ್ತಾರೆ. ಈ ಕೆಳಕಂಡ 8 ನೌಕರರುಗಳ ಪೈಕಿ 4 ನೌಕರರುಗಳು ದೋಷಾರೋಪಣೆಯಲ್ಲಿ ಪ್ರಸ್ತಾಪಿಸಿರುವ ಮೊತ್ತಕಿಂತ ಕಡಿಮೆ ಹಣ ಪಾವತಿಸಿರುವುದರಿಂದ ಹಾಗೂ 4 ನೌಕರರುಗಳು ದೋಷಾರೋಪಣಾ ಪಟ್ಟಿಗೆ ಉಚಿತ ಹೇಳಿಕೆ ಸಲ್ಲಿಸದೆ ಇರುವುದರಿಂದ ಆಪಾದಿತರ ವಿರುದ್ಧದ ಮಾಡಲಾದ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯುವ ಸಲುವಾಗಿ ಇಲಾಖಾ ವಿಚಾರಣೆಯನ್ನು ನಡೆಸಲು ಸರ್ಕಾರವು ತೀರ್ಮಾನಿಸಿದೆ.

| ಕ್ರ.ಸಂ | ಹೆಸರು | ಹುದ್ದೆ |
|---|---|---|
| 1 | ಶ್ರೀ ಭಾಸ್ಕರ್ ಅಡಿಗ | ಗ್ರಾ.ಪಂ ಕಾರ್ಯದರ್ಶಿ |
| 2 | ಶ್ರೀ ಬಿ.ಜಿ.ಶೇಖರಪ್ಪ | ಗ್ರಾ.ಪಂ ಕಾರ್ಯದರ್ಶಿ |
| 3 | ಶ್ರೀ ನೀಲಯ್ಯ | ಗ್ರಾ.ಪಂ ಕಾರ್ಯದರ್ಶಿ |
| 4 | ಶ್ರೀ ಸಿ.ಎಸ್.ಕೃಷ್ಣಮೂರ್ತಿ | ಪಂ.ಅಭಿವೃದ್ಧಿ ಅಧಿಕಾರಿ |
| 5 | ಶ್ರೀ ಚಿಕ್ಕಮಾದಯ್ಯ | ಗ್ರಾ.ಪಂ ಕಾರ್ಯದರ್ಶಿ |
| 6 | ಶ್ರೀ ಮಾದಯ್ಯ | ಗ್ರಾ.ಪಂ ಕಾರ್ಯದರ್ಶಿ |
| 7 | ಶ್ರೀ ಬಸವಣ್ಣ ಎಂ | ಗ್ರಾ.ಪಂ ಕಾರ್ಯದರ್ಶಿ |
| 8 | ಶ್ರೀ ರಾಮು | ಪಂ.ಅಭಿವೃದ್ಧಿ ಅಧಿಕಾರಿ |

ಸದರಿ ಪ್ರಕರಣದಲ್ಲಿ ಈ ಮೇಲಿನ 08 ನೌಕರರುಗಳ ವಿರುದ್ಧ ವಿಚಾರಣೆಯನ್ನು ನಡೆಸಿ ಸ್ಪಷ್ಟ ಅಭಿಪ್ರಾಯದೊಂದಿಗೆ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಉಪಕಾರ್ಯದರ್ಶಿ ಜಿಲ್ಲಾ ಪಂಚಾಯತ್ ಚಾಮರಾಜನಗರ ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ಸಹಾಯಕ ಕಾರ್ಯದರ್ಶಿ ಜಿಲ್ಲಾ ಪಂಚಾಯತ್ ಚಾಮರಾಜನಗರ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಲಾಗಿದ್ದ, ದಿನಾಂಕ:22.06.2017ರ ಆದೇಶವನ್ನು ಮಾರ್ಪಡಿಸಿ ಈ ಮೇಲಿನ 05 ಜನ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು 08 ಜನ ಗ್ರಾಮ ಪಂಚಾಯತ್ ಕಾರ್ಯದರ್ಶಿಗಳು / ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ವಿರುದ್ಧ ಮಾಡಲಾದ ಆರೋಪಗಳ ಸತ್ಯಾಸತ್ಯತೆಗಳನ್ನು ತಿಳಿಯುವ ಸಲುವಾಗಿ ಜಂಟಿ ಇಲಾಖಾ ವಿಚಾರಣೆಯನ್ನು ನಡೆಸಲು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 70 ವಿಸೇಬಿ 2012 ಬೆಂಗಳೂರು,ದಿನಾಂಕ:21-09-2017</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಸರ್ಕಾರವು ಪ್ರಕರಣದಲ್ಲಿ ಬಾಗಿಯಾಗಿರುವ 05 ಜನ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ 08 ಜನ ಕಾರ್ಯದರ್ಶಿ/ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಆದೇಶಿಸಿದೆ.

ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಪ್ರಕಾರ ಇಲಾಖಾ ವಿಚಾರಣೆಯನ್ನು ನಡೆಸಲು, ಅದೇ ನಿಯಮಾವಳಿಗಳ ನಿಯಮ 11(2) ರ ಪ್ರಕಾರ ಯೋಜನಾ ನಿರ್ದೇಶಕರು (ಡಿ.ಆರ್.ಡಿ.ಎ) ಜಿಲ್ಲಾ ಪಂಚಾಯತ್ ಮಡಿಕೇರಿ ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದೆ.

ಶಿಸ್ತು ಪ್ರಾಧಿಕಾರಿಯ ಪರವಾಗಿ ಪ್ರಕರಣವನ್ನು ವಿಚಾರಣಾಧಿಕಾರಿಯವರ ಮುಂದೆ ಮಂಡಿಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11(5)(ಸಿ) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸಹಾಯಕ ಕಾರ್ಯದರ್ಶಿ ಜಿಲ್ಲಾ ಪಂಚಾಯತಿ, ಚಾಮರಾಜನಗರ ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನದ ಪ್ರಕಾರ ಇಲಾಖಾ ವಿಚಾರಣೆ ಜರುಗಿಸಿ ಪ್ರತಿಯೊಬ್ಬ ಆಪಾದಿತ ನೌಕರರ ವಿರುದ್ಧದ ಪ್ರತಿಯೊಂದು ಆರೋಪಗಳು ಸಾಬೀತಾಗಿರುವ / ಸಾಬೀತಾಗಿಲ್ಲದಿರುವ ಬಗ್ಗೆ ಸ್ಪಷ್ಟ ಅಭಿಪ್ರಾಯದೊಂದಿಗೆ ವಿಚಾರಣಾ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳಿಗೆ ಸೂಕ್ತ ಸ್ಥಳಾವಕಾಶ, ಶೀಘ್ರಲಿಪಿಗಾರರ ಸೇವೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಾಮರಾಜನಗರ ಇವರು ಕ್ರಮ ಕೈಗೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

21/9/2017.
(ಡಿ.ಎಸ್.ವಿಜಯ್)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ. ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1) ಪ್ರಧಾನ ಮಹಾಲೇಖಪಾಲರು (ಎ&ಇ)ರವರ ಕಾರ್ಯದರ್ಶಿ, ಕರ್ನಾಟಕ ಹೊಸಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂ-5329, ಬೆಂಗಳೂರು-560001.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಾಮರಾಜನಗರ/ಮಡಿಕೇರಿ
3) ಯೋಜನಾ ನಿರ್ದೇಶಕರು (ಡಿ.ಆರ್.ಡಿ.ಎ) ಜಿಲ್ಲಾ ಪಂಚಾಯತಿ, ಮಡಿಕೇರಿ(ವಿಚಾರಣಾಧಿಕಾರಿ).
4) ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಚಾಮರಾಜನಗರ(ಮಂಡನಾಧಿಕಾರಿ).
4) ಆಪಾದಿತ ನೌಕರರುಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿ.ಪಂ.ಚಾಮರಾಜನಗರ ಇವರ ಮುಖಾಂತರ)

<u>ಪ್ರತಿಯನ್ನು:-</u>

1) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾ .ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2) ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.